ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ನೇತೃತ್ವದ ಬಿಜೆಪಿ ಸರಕಾರ 2 ವರ್ಷಾವಧಿಯ ಆಡಳಿತದಲ್ಲಿ ಅಧಿಕಾರಕ್ಕಾಗಿ ದೊಂಬರಾಟ ಬಿಟ್ಟು ಬೇರೇನೂ ಸಾಧನೆ ಮಾಡಿಲ್ಲ.

■ ಡಿ.ಕೆ. ಸುರೇಶ್ | ಸಂಸದರು

ಸುದ್ದಿ ಮಿಂಚು

ಮಠಾಧಿಪತಿಗಳ ನಿಲುವು ಸರಿಯಲ್ಲ

ವಿಜಯಪುರ: ರಾಜ್ಯದಲ್ಲಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರೇ ಮುಂದುವರೆಯಬೇಕು ಎಂದು ವಿವಿಧ ಸಮುದಾಯಗಳ ಮಠಾಧೀಶರು, ಸೇರಿದಂತೆ ಪಾದ್ರಿಗಳು, ಅವರ ಬೆಂಬಲಕ್ಕೆ ನಿಂತಿರುವುದು ಸಂವಿಧಾನದ ಅಣಕವಾಗಿದೆ ಎಂದು ಕರ್ನಾಟಕ ಮಾದಿಗ ದಂಡೋರ ರಾಜ್ಯ ಘಟಕದ ಪ್ರಚಾರ ಸಮಿತಿ ಅಧ್ಯಕ್ಷ ಬುಳ್ಳಹಳ್ಳಿ ರಾಜಪ್ಪ ಆಕ್ರೋಶ ವ್ಯಕ್ತಪಡಿಸಿದರು.

ಪತ್ರಿಕಾ ಹೇಳಿಕೆ ನೀಡಿರುವ ಅವರು, ಭಾರತ ಸಂವಿಧಾನದಡಿಯಲ್ಲಿ ಜನರಿಂದ ಆಯ್ಕೆಯಾಗುವಂತಹ ಶಾಸಕರ ಹೆಚ್ಚಿನ ಸಂಖ್ಯೆಯ ಬೆಂಬಲ ಯಾರಿಗೆ ಇರುತ್ತದೋ ಅವರು ಶಾಸಕಾಂಗ ಪಕ್ಷದ ನಾಯಕರಾಗುತ್ತಾರೆ. ಪಾದ್ರಿಗಳು, ಆಳುವ ಸರ್ಕಾರಗಳಿಗೆ ಮಾರ್ಗದರ್ಶನ ಮಾಡಿ, ಸಮಾಜದ ಏಳಿಗೆಗಾಗಿ ಕೆಲಸ ಮಾಡಬೇಕೆ ಹೊರತು ನೇರವಾಗಿ ರಾಜಕೀಯ ಮಾಡಲು ಮುಂದಾಗಿರುವುದು ಆತಂಕಕಾರಿ ಬೆಳವಣಿಗೆ ಎಂದರು.

ಬ್ರಹ್ಮೋತ್ಸವಕ್ಕೆ ಚಾಲನೆ

ಮೇಲುಕೋಟೆ : ಮೈಸೂರು ಮುಮ್ಮಡಿ ಶ್ರೀಕೃಷ್ಣರಾಜ ಒಡೆಯರ್ ರವರ ಜನ್ಮ ವರ್ಧಂತಿ ಶುಭದಿನವಾದ ಭಾನುವಾರ ಮೂಲಮೂರ್ತಿ ಚೆಲುವನಾರಾಯಣಸ್ವಾಮಿಗೆ ವೇದಮಂತ್ರಗಳೊಂದಿಗೆ ಮಹಾಭಿಷೇಕ ನೆರವೇರುವುದರೊಂದಿಗೆ ಶ್ರೀಕೃಷ್ಣರಾಜಮುಡಿಬ್ರಹ್ಮೋತ್ಸವಕ್ಕೆ ಚಾಲನೆ ನೀಡಲಾಯಿತು.

ಸರ ಕಳುವಿಗೆ ವಿಫಲ ಯತ್ನ

ದೇವನಹಳ್ಳಿ: ಚಾಕು ತೋರಿಸಿ ಬೆದರಿಕೆ ಹಾಕಿದ ಸರಗಳ್ಳನ ಜೊತೆ ಏಕಾಂಗಿಯಾಗಿ ಹೋರಾಡಿದ ಮಹಿಳೆ, ಕಳ್ಳನನ್ನು ಓಡಿಸಿ ತನ್ನ ಅರ್ಧ ಬಂಗಾರದ ಸರ ಹಾಗೂ ಆರೋಪಿ ಹಲ್ಲೆಗೆ ಯತ್ನಿಸಿದ್ದ ಚಾಕು ಕಿತ್ತುಕೊಂಡ ಪ್ರಕರಣ ತಾಲೂಕಿನ ವಿಶ್ವನಾಥಪುರ ಪೋಲೀಸ್ ಠಾಣೆ ವ್ಯಾಪ್ತಿಯ ಕೊಯಿರಾ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ನಿವಾಸಿ ನವಿತಾ ದೇವರಾಜ್ ಅವರ ಮಾಂಗಲ್ಯ ಸರವನ್ನು ಸರಗಳ್ಳತನದ ವ್ಯಕ್ತಿ ಕಿತ್ತುಕೊಂಡು ಹೋಗುತ್ತಿದ್ದ ವೇಳೆ ಸರಗಳ್ಳನನ್ನು ಬೆನ್ನಟ್ಟಿದ್ದರೂ ಕಳ್ಳರ ಸುಳಿವು ದೊರೆತಿಲ್ಲ. ವಿಷಯ ತಿಳಿದ ಕೂಡಲೇ ಸ್ಥಳೀಯರು ಹುಡುಕಾಡಿದರೂ ಪ್ರಯೋಜನವಾಗಿಲ್ಲ. ವಿಶ್ವನಾಥಪುರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

ಧರಣೇಂದ್ರಬಾಬು ನಿಧನ

ದೇವನಹಳ್ಳಿ: ಮಾಜಿ ಪುರಸಭಾ ಅಧ್ಯಕ್ಷ ಸಿ.ಜಗನ್ನಾಥ್ ಸಹೋದರ ಸಿ.ಧರಣೇಂದ್ರಬಾಬು (41) ಹೃದಯಾಘಾತದಿಂದ ನಿಧನರಾದರು. ಮೃತರಿಗೆ ತಾಯಿ ಮುನಿರತ್ನಮ್ಮ, ಪತ್ನಿ ದಿವ್ಯ ಹಾಗೂ ಇಬ್ಬರು ಪುತ್ರರು ಇದ್ದಾರೆ.

ಕ್ಷೇತ್ರದಲ್ಲಿ ವಿವಿಧ ಕಾಮಗಾರಿಗೆ ಚಾಲನೆ | ಗ್ರಾಮೀಣ ಪ್ರದೇಶದಲ್ಲಿ ಮೂಲ ಸೌಲಭ್ಯ ಕಲ್ಪಿಸಲು ಮೊದಲ ಆದ್ಯತೆ

ಗ್ರಾಮೀಣಾಭಿವೃದ್ಧಿಗೆ ಅನುದಾನ ಸದ್ಬಳಕೆ ಅಗತ್ಯ

ಸಂ.ಕ. ಸಮಾಚಾರ, ದೇವನಹಳ್ಳಿ

ಗ್ರಾಮೀಣ ಪ್ರದೇಶಗಳ ಸರ್ವತೋಮುಖ ಅಭಿವೃದ್ಧಿಗಾಗಿ ಸರ್ಕಾರದಿಂದ ಬಿಡುಗಡೆಯಾಗುವಂತಹ ಅನುದಾನವನ್ನು ಸದ್ಬಳಕೆ ಮಾಡಿಕೊಳ್ಳುವಲ್ಲಿ ಸಾರ್ವಜನಿಕರು ಕಾಳಜಿ ವಹಿಸಬೇಕೆಂದು ಶಾಸಕ ನಿಸರ್ಗ ನಾರಾಯಣಸ್ವಾಮಿ ಹೇಳಿದರು.

ತಾಲೂಕಿನ ಜಾಲಿಗೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನಾಗಮಂಗಲ ಗ್ರಾಮದಲ್ಲಿ ನೆಲತೊಟ್ಟಿ ನಿರ್ಮಾಣ ಕಾಮಗಾರಿ ಹಾಗೂ ಅರದೇಶನಹಳ್ಳಿ ಗ್ರಾಮದಲ್ಲಿ ಹೈಮಾಸ್ಟ್ ದೀಪಗಳ ಉದ್ಘಾಟನೆ ಹಾಗೂ ಶುದ್ಧ ಕುಡಿಯುವ ನೀರಿನ ಶೇಖರಣ ಕ್ಯಾನ್ ವಿತರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು. ಬಿಜೆಪಿ ಸರ್ಕಾರದ ಅಸಹಕಾರದ ನಡುವೆಯೂ ಕ್ಷೇತ್ರದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಾಗುತ್ತಿದೆ. ಗ್ರಾಮೀಣ ಪ್ರದೇಶಗಳಿಗೆ ಅತ್ಯಗತ್ಯವಾಗಿ ಬೇಕಾಗಿರುವ ಮೂಲಸೌಕರ್ಯಗಳಾದ ಶುದ್ಧಕುಡಿಯುವ ನೀರು, ರಸ್ತೆ, ಚರಂಡಿ, ಬೀದಿ ದೀಪಗಳನ್ನು ಒದಗಿಸುವುದು ನಮ್ಮ ಕರ್ತವ್ಯವಾಗಿದೆ. ಚುನಾವಣೆ ಸಮಯದಲ್ಲಿ ಮಾತ್ರವೇ ರಾಜಕಾರಣ ಮಾಡ್ತೇನೆ. ಚುನಾವಣೆಗಳು ಮುಗಿಯುತ್ತಿದ್ದಂತೆ ಪಕ್ಷಭೇದ ಮರೆತು ಅಭಿವೃದ್ಧಿ ಕಾರ್ಯಗಳತ್ತ ಗಮನಹರಿಸುತ್ತೇನೆ ಎಂದರು.

ಜೆಡಿಎಸ್ ತಾಲೂಕು ಘಟಕದ ಅಡಾಖ್ ಕಮಿಟಿ ಅಧ್ಯಕ್ಷ ಮುನೇಗೌಡ ಮಾತನಾಡಿ, ಸಿಕ್ಕಿರುವಂತಹ ಅವಕಾಶವನ್ನು ಒಳ್ಳೆಯ ಉದ್ದೇಶಕ್ಕಾಗಿ ಬಳಸಿಕೊಂಡು ನಮ್ಮ ಪಕ್ಷದಿಂದ ಆಯ್ಕೆಯಾಗಿರುವ ಎಲ್ಲಾ ಜನಪ್ರತಿನಿಧಿಗಳು ಅಭಿವೃದ್ಧಿಯತ್ತ ಗಮನಹರಿಸಿ ಕೆಲಸ ಮಾಡುತ್ತಿದ್ದಾರೆ ಎಂದರು.

ನಾಗಮಂಗಲ ಗ್ರಾಮದಲ್ಲಿ ನೀರಿನ ನೆಲ ತೊಟ್ಟಿ ನಿರ್ಮಾಣ ಕಾಮಗಾರಿಗೆ ಶಾಸಕ ನಿಸರ್ಗ ನಾರಾಯಣಸ್ವಾಮಿ ಚಾಲನೆ ನೀಡಿದರು.

■ ಚುನಾವಣೆ ಸಮಯದಲ್ಲಿ ಮಾತ್ರವೇ ರಾಜಕಾರಣ
■ ಪಕ್ಷ ಭೇದ ಮರೆತು ಅಭಿವೃದ್ಧಿ ಕಾರ್ಯ

ಗ್ರಾಮ ಪಂಚಾಯಿತಿ ಅಧ್ಯಕ್ಷೆ ದೀಪ್ತಿ ವಿಜಯಕುಮಾರ್ ಮಾತನಾಡಿ, ಹಳ್ಳಿಗಳ ಸರ್ವತೋಮುಖ ಅಭಿವೃದ್ಧಿಗಾಗಿ ನಮಗೆ ಇರುವಂತಹ ಎಲ್ಲಾ ಅವಕಾಶಗಳನ್ನು ನಾವು ಸದ್ಬಳಕೆ ಮಾಡಿಕೊಂಡು ಜನರಿಗೆ ಸೌಲಭ್ಯಗಳನ್ನು ತಲುಪಿಸುತ್ತಿದ್ದೇವೆ. ಸಾರ್ವಜನಿಕರೂ ಕೂಡಾ ಹಳ್ಳಿಗಳಲ್ಲಿ ಸ್ವಚ್ಛತೆಗೆ ಆದ್ಯತೆ ನೀಡಬೇಕು ಎಂದರು.

ಜೆಡಿಎಸ್ ತಾಲೂಕು ಘಟಕದ ಪ್ರಧಾನ ಕಾರ್ಯದರ್ಶಿ ಜಿ.ಎ.ರವೀಂದ್ರ, ಗ್ರಾಮ ಪಂಚಾಯಿತಿ ಸದಸ್ಯೆ ಮುನಿರತ್ನಮ್ಮ ಗೋಪಾಲಸ್ವಾಮಿ, ಜಾಲಿಗೆ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ರಾಮಣ್ಣ, ತಾಲೂಕು ಪಂಚಾಯಿತಿ ಮಾಜಿ ಸದಸ್ಯರಾದ ಮಹೇಶ್, ಗೋಪಾಲಸ್ವಾಮಿ, ಮುಖಂಡರಾದ ಮಾಜಿ ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ವೆಂಕಟಸ್ವಾಮಿ, ಕಾಮೇನಹಳ್ಳಿ ರಮೇಶ್, ಜೆಡಿಎಸ್ ಹೋಬಳಿ ಘಟಕದ ಕಾರ್ಯಾಧ್ಯಕ್ಷ ಲಕ್ಷ್ಮಣ್ ಬಿಡಿಸಿಸಿ ಬ್ಯಾಂಕ್ ನಿರ್ದೇಶಕ ಸೊಣ್ಣಪ್ಪ, ಎನ್.ಎಂ.ರಾಮಚಂದ್ರಪ್ಪ, ವಿಎಸ್‌ಎಸ್‌ಎನ್ ನಿರ್ದೇಶಕ ಹನುಮಂತಗೌಡ, ಆಂಜಿನಪ್ಪ ಇದ್ದರು.

ಶೈಕ್ಷಣಿಕ ಸವಾಲು ಸುಗಮವಾಗಲಿ

ದೇವನಹಳ್ಳಿ: ಪ್ರತಿ ಹಂತದಲ್ಲೂ ವಿದ್ಯಾರ್ಥಿಗಳು ಯಶಸ್ವಿಗೊಳ್ಳುವುದರ ಮೂಲಕ ಮುಂದಿನ ಶೈಕ್ಷಣಿಕ ಸವಾಲು ಸುಗಮವಾಗಲಿ ಎಂದು ಕುಂದಾಣ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಪ್ರಾಂಶುಪಾಲ ವಿ.ವೆಂಕಟೇಶ್ ತಿಳಿಸಿದರು.

ದೇವನಹಳ್ಳಿ ತಾಲೂಕಿನ ಕುಂದಾಣ ಮೊರಾರ್ಜಿ ದೇಸಾಯಿ ವಸತಿ ಶಾಲಾ ಆವರಣದಲ್ಲಿ 2020-21ನೇ ಸಾಲಿನ ಶೈಕ್ಷಣಿ ವರ್ಷ ಎಸ್ಸೆಸ್ಸೆಲ್ಸಿಯ ಅಂತಿಮ ಘಟ್ಟ ಮುಗಿಸಿದ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ನೀಡಿ ಅವರು ಮಾತನಾಡಿದರು. ವಿದ್ಯಾರ್ಥಿಗಳು ತಮ್ಮ ಪೋಷಕರ ಮತ್ತು ಶಿಕ್ಷಕರ ಸಲಹೆ ಮಾರ್ಗದರ್ಶನ ಪಡೆದು ಮುಂದಿನ ಶೈಕ್ಷಣಿಕ ವರ್ಷಕ್ಕೆ ಕಾಲಿಡಬೇಕು. ಪ್ರತಿ ವಿದ್ಯಾರ್ಥಿ ಶಾಲೆಯ ಕೀರ್ತಿಯನ್ನು ಎತ್ತಿಹಿಡಿಯಬೇಕು. ಕಾಲೇಜು ಹಂತದಲ್ಲಿಯೂ ಸಹ ಶಿಸ್ತು, ಸಂಯಮವನ್ನು ಪಾಲಿಸಬೇಕು. ಗುರುಗಳೊಂದಿಗೆ ಉತ್ತಮ ಬಾಂಧವ್ಯ ಹೊಂದಬೇಕು. ಕಾಲೇಜು ಸೇರುವ ಮುನ್ನ ತಾವು ಆರಿಸಿಕೊಳ್ಳುವ ಐಚ್ಛಿಕ ವಿಷಯಗಳ ಬಗ್ಗೆ ಜ್ಞಾನ ಹೊಂದಿರಬೇಕು ಎಂದು ಸಲಹೆ ಮಾಡಿದರು.

ಎಸ್ಸೆಸ್ಸೆಲ್ಸಿಯ ವಿದ್ಯಾರ್ಥಿಗಳಿಗೆ ಶಾಲಾ ಆಡಳಿತ ವತಿಯಿಂದ ಬೀಳ್ಕೊಡುಗೆ ನೀಡಲಾಯಿತು.

ಎಸ್ಸೆಸ್ಸೆಲ್ಸಿ ವಿದ್ಯಾರ್ಥಿಗಳು ತಮ್ಮ ಅನುಭವ ಮತ್ತು ಅಭಿಪ್ರಾಯ ಹಂಚಿಕೊಂಡರು. ದೈಹಿಕ ಶಿಕ್ಷಣ ಶಿಕ್ಷಕ ಯಲ್ಲಪ್ಪ ನಾಯಕ, ಶಿಕ್ಷಕರಾದ ಶ್ವೇತ.ಎಂ.ಎಸ್, ಹಾಜಿರಾಬಾನು, ಅರುಣ.ಎಚ್.ಎನ್, ಮೀನಾಕ್ಷಿ, ಶೈಲಜಾ, ಗಾಯಿತ್ರಿ ಹೆಗಡೆ, ಸಿ.ಡಿ.ಗಾಯಿತ್ರಿ, ಯಶೋಧಮ್ಮ, ಜ್ಯೋತಿ, ನಾರಾಯಣಸ್ವಾಮಿ, ಶಂಕರ್ ಇದ್ದರು.

ಸೇವಾಮನೋಭಾವವೇ ಲಯನ್ಸ್ ಕ್ಲಬ್ ಸಂಸ್ಥೆಯ ಧ್ಯೇಯ

ಸಂ.ಕ. ಸಮಾಚಾರ ನಲ್ಲೂರು

ಗ್ರಾಮಗಳಲ್ಲಿ ಲಯನ್ಸ್ ವತಿಯಿಂದ ಹಲವಾರು ಕಾರ್ಯಕ್ರಮಗಳು.

ಗ್ರಾಮಗಳಲ್ಲಿ ಲಯನ್ಸ್ ಕ್ಲಬ್ ಮುಖಾಂತರ ಆರೋಗ್ಯ ಶಿಬಿರಗಳು ಹಾಗೂ ರಕ್ತದಾನ ಕಾರ್ಯಕ್ರಮಗಳು ಹೆಚ್ಚಾಗಿ ನಡೆಸಲಾಗುವುದು ಎಂದು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಲಯನ್ಸ್ ಕ್ಲಬ್‌ನ ಅಧ್ಯಕ್ಷರಾದ ಜೆ.ಎನ್ ಮಂಜುನಾಥ್ ಹೇಳಿದರು.

ದೇವನಹಳ್ಳಿ ತಾಲೂಕು ಬೆಟ್ಟಕೋಟೆ ರಾಮಕೃಷ್ಣ ಗ್ರಾಮಾಂತರ ಪ್ರೌಢಶಾಲೆಯಲ್ಲಿ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಲಯನ್ಸ್ ಕ್ಲಬ್ ನೂತನ 2021-22ನೇ ಸಾಲಿಗೆ ಅಧ್ಯಕ್ಷರಾಗಿ ನೇಮಕಗೊಂಡು ಮಾತನಾಡಿ, ಈ ಲಯನ್ಸ್‌ಕ್ಲಬ್‌ನಲ್ಲಿ ಪ್ರತಿ ವರ್ಷದಂತೆ ರಕ್ತದಾನ ಶಿಬಿರ, ಆರೋಗ್ಯ ಶಿಬಿರ ಹಾಗೂ ಪರಿಸರ ಸಂಬಂಧಪಟ್ಟಂತೆ ಸಸಿ ನೆಡುವ ಕಾರ್ಯಕ್ರಮಗಳು ನಡೆಸಿರುವುದರಿಂದ ಒಳ್ಳೆಯ ಸೇವಾಮನೋಭಾವ ಬೆಳೆಸಿಕೊಳ್ಳುತಿದ್ದೇವೆ ಹಾಗೂ ಇನ್ನೂ ಹೆಚ್ಚು ಕಾರ್ಯಕ್ರಮಗಳನ್ನು ಆಯೋಜಿಸಿದರೆ ಗ್ರಾಮೀಣ ಭಾಗದ ಬಡಜನತೆಗೆ ಅನುಕೂಲವಾಗುತ್ತದೆ ಎಂದರು.

ಲಯನ್ ರಾಜಶೇಖರಯ್ಯ ಮಾತನಾಡಿ, ಲಯನ್ಸ್‌ಕ್ಲಬ್‌ನಲ್ಲಿ ಯಾವುದೇ ಆದಾಯವನ್ನು ನಿರೀಕ್ಷಿಸದೇ ಎಲ್ಲರೂ ಒಗ್ಗಟ್ಟಿನಿಂದ ಸೇವಾಮನೋಭಾವ ಬೆಳೆಸಿಕೊಳ್ಳುವುದು ಕಲಿಯುವುದಕ್ಕೆ ಸಹಕಾರಿಯಾಗುತ್ತದೆ. ಪ್ರತಿ ವರ್ಷವೂ ಸೇವಾಕಾರ್ಯಕ್ರಮಗಳನ್ನು ನಡೆಸಿ ಅದನ್ನು ಪಟ್ಟಿಮಾಡಿ ಬೆಂಗಳೂರಿನ ಲಯನ್ಸ್‌ಕ್ಲಬ್‌ಗೆ ಕಳುಹಿಸಲಾಗಿದೆ ಎಂದರು.

ಶಾಲಾ ನಿವೃತ್ತಿ ದೈಹಿಕ ಶಿಕ್ಷಕ ಅಶ್ವಥ್‌ನಾರಾಯಣಸ್ವಾಮಿ, ಶಾಲಾ ಮುಖ್ಯ ಶಿಕ್ಷಕ ಪ್ರಕಾಶ್, ಕೆಬಿ ಪ್ರಭುಸ್ವಾಮಿ, ನಾರಾಯಣಸ್ವಾಮಿ, ಟಿ ಕೆ ಲಿಂಗಪ್ಪ ಹಾಗೂ ಲಯನ್ಸ್‌ಕ್ಲಬ್‌ನ ಪದಾಧಿಕಾರಿಗಳು ಹಾಜರಿದ್ದರು.

kotak Kotak Mahindra Bank
ಕೊಟ್ಯಾಕ್ ಮಹೀಂದ್ರ ಬ್ಯಾಂಕ್ ಲಿಮಿಟೆಡ್
ಸ್ವಾಧೀನ ಸೂಚನೆ
ಸ್ಥಳ: ಬೆಂಗಳೂರು, ದಿನಾಂಕ: 26-07-2021

LVB DBS
ಲಕ್ಷ್ಮೀ ವಿಲಾಸ್ ಬ್ಯಾಂಕ್
(ಪ್ರಸ್ತುತ ಡಿಬಿಎಸ್ ಬ್ಯಾಂಕ್ ಇಂಡಿಯಾ ಲಿಮಿಟೆಡ್)
ಡಿಮ್ಯಾಂಡ್ ನೋಟಿಸು
ಸ್ಥಳ : ಬೆಂಗಳೂರು
ದಿನಾಂಕ :26.07.2021

ಧಾರ್ಮಿಕ ಆಚರಣೆ ಸದ್ಗುಣದ ಪ್ರತೀಕ

ಸಂ.ಕ.ಸಮಾಚಾರ ನಂದಗುಡಿ

ಮನುಷ್ಯನ ಜೀವನ ಯಾಂತ್ರಿಕವಾಗುತ್ತಿರುವುದರಿಂದ ಜೀವನ ದುಸ್ತರವಾಗುತ್ತಿದೆ, ಅಸೂಯೆ ತೊರೆದು ಪರೋಪಕಾರ ಮತ್ತು ಭಗವಂತನ ಸೇವೆಯಲ್ಲಿ ತೊಡಗಿಸಿಕೊಂಡಾಗ ಮನಸ್ಸಿಗೆ ನೆಮ್ಮದಿ ಸಿಗಲಿದೆ ಎಂದು ಶ್ರೀಕ್ಷೇತ್ರದ ಸಂಸ್ಥಾಪಕರಾದ ಡಾ. ಡಿ.ಎಲ್ ವೀರಬ್ರಹ್ಮಾಚಾರ್ ಗುರೂಜಿ ಹೇಳಿದರು.

ನಂದಗುಡಿ ಸಮೀಪ ದೊಡ್ಡನಲ್ಲೂರಹಳ್ಳಿ ಗ್ರಾಮದ ಸುಪ್ರಸಿದ್ಧ ಶ್ರೀ ಅಭಯ ಶನೇಶ್ವರ ಸ್ವಾಮಿ ದೇವಾಲಯದಲ್ಲಿ ಗುರು ಪೂರ್ಣಿಮೆ ಪ್ರಯುಕ್ತ ಲೋಕ ಕಲ್ಯಾಣಾರ್ಥವಾಗಿ 14ನೇ ವರ್ಷದ ಶ್ರೀ ಲಕ್ಷ್ಮೀಸತ್ಯನಾರಾಯಣಸ್ವಾಮಿ ವ್ರತ ಸಾನಿಧ್ಯ ವಹಿಸಿ ಮಾತನಾಡಿದರು. ಪ್ರತಿ ಪೂರ್ಣಿಮೆಯಂದು ಶ್ರೀ ಸತ್ಯನಾರಾಯಣಸ್ವಾಮಿ ವ್ರತ, ಹೋಮ ಹವನ ಪೂಜಾ ಕೈಂಕರ್ಯ ನಡೆಯುತ್ತಿದ್ದು, ಭಕ್ತಾದಿಗಳು ಶುಚಿಭೂತರಾಗಿ ಆತ್ಮಶುದ್ಧಿಯಿಂದ ನಿವೇದಿಸಿಕೊಂಡಲ್ಲಿ ಕಷ್ಟ ಕಾರ್ಪಣ್ಯಗಳು ದೂರವಾಗುತ್ತದೆ ಎಂದರು. ಬಂದಂತಹ ಎಲ್ಲ ಭಕ್ತಾದಿಗಳಿಗೂ ಪ್ರಸಾದ ಹಾಗೂ ಅನ್ನ ಸಂತರ್ಪಣೆ ಏರ್ಪಡಿಸಲಾಗಿತ್ತು. ಕಾರ್ಯಕ್ರಮದ ನೇತೃತ್ವವನ್ನು ರವಿಸುತ ಸೇವಾ ಟ್ರಸ್ಟ್‌ನ ಪದಾಧಿಕಾರಿಗಳಾದ ಸಂದೀಪ್, ಪ್ರಭಕರ್, ನಂಜಪ್ಪ, ಮರೀಶ್, ಬಸವರಾಜು, ಧನುಷ್ ನಡೆಸಿಕೊಟ್ಟರು.

ದೊಡ್ಡನಲ್ಲೂರಹಳ್ಳಿಯ ಅಭಯ ಶನೇಶ್ವರ ಸ್ವಾಮಿ ದೇವಾಲಯದಲ್ಲಿ ಶ್ರೀ ಲಕ್ಷ್ಮೀಸತ್ಯನಾರಾಯಣಸ್ವಾಮಿ ವ್ರತ ನಡೆಯಿತು.

ಕನ್ನಡ ಭಾಷೆಯಲ್ಲಿ ಬ್ಯಾಂಕ್ ಪರೀಕ್ಷೆ ಅವಕಾಶಕ್ಕೆ ಆಗ್ರಹ

ಬ್ಯಾಂಕುಗಳ ಪರೀಕ್ಷೆಗಳಲ್ಲಿ ಕನ್ನಡ ಭಾಷೆಯಲ್ಲಿ ಬರೆಯಲು ಅವಕಾಶ ನೀಡುವಂತೆ ಆಗ್ರಹಿಸಿ ಮನವಿ ಸಲ್ಲಿಸಲಾಯಿತು.

ಸಂ.ಕ. ಸಮಾಚಾರ ದೊಡ್ಡಬಳ್ಳಾಪುರ

ಕೇಂದ್ರ ಸರ್ಕಾರವು ಕನ್ನಡ ಭಾಷೆಯನ್ನು ಕಡೆಗಣಿಸುತ್ತಿರುವುದು ಸೂಕ್ತವಲ್ಲ. ಸಾವಿರಾರು ವರ್ಷಗಳ ಇತಿಹಾಸವಿರುವ ಭಾಷೆಯನ್ನು ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಬರೆಯಲು ಅವಕಾಶ ನೀಡುವ ಮೂಲಕ ಕನ್ನಡಕ್ಕೆ ಮಾನ್ಯತೆ ನೀಡಬೇಕೆಂದು ತಾಲೂಕು ಕಸಾಪ ಅಧ್ಯಕ್ಷೆ ಪ್ರಮೀಳಾ ಮಹಾದೇವ್ ಒತ್ತಾಯಿಸಿದರು.

ರಾಷ್ಟ್ರೀಕೃತ ಬ್ಯಾಂಕುಗಳಲ್ಲಿನ ಅಭ್ಯರ್ಥಿಗಳ ನೇಮಕಾತಿ ಪರೀಕ್ಷೆಗಳಲ್ಲಿ ಸಂಬಂಧಿಸಿದಂತೆ ಕನ್ನಡ ಭಾಷೆಯಲ್ಲೂ ಪರೀಕ್ಷೆ ಬರೆಯಲು ಅವಕಾಶ ನೀಡುವಂತೆ, ಕನ್ನಡಿಗರಿಗೆ ಆಗುತ್ತಿರುವ ವಂಚನೆ ತಡೆಯುವಂತೆ ಕೇಂದ್ರ ಸರ್ಕಾರವನ್ನು ಆಗ್ರಹಿಸಿ ತಾಲ್ಲೂಕು ದಂಡದಾಧಿಕಾರಿಗಳಾದ ಟಿ.ಎಸ್.ಶಿವರಾಜ್ ಅವರಿಗೆ ಮನವಿ ಪತ್ರ ನೀಡಲಾಯಿತು.

ಪದಾಧಿಕಾರಿಗಳಾದ ತರಿದಾಳ್ ಶ್ರೀನಿವಾಸ್, ಡಿ.ಈ.ಶಿವಕುಮಾರ್, ಪ್ರವೀಣ್ ಕುಮಾರ್, ಬಿ.ಪಿ. ಹರಿಕುಮಾರ್, ಕವಿ.ನಂಜಯ್ಯ ಮಹಾದೇವ್, ಭಾಸ್ಕರ್, ಮಂಜುನಾಥ್, ಸೂರಿ, ವೆಂಕಟೇಶ್, ಕೃಷ್ಣಮೂರ್ತಿ ಇದ್ದರು.

ಸಂಯುಕ್ತ ಕರ್ನಾಟಕ ಕ್ಲಾಸಿಫೈಡ್ಸ್
ಸಂಪರ್ಕಿಸಿ: 9036213209/ 9740809407
Email: skadvtblr@gmail.com

ಪ್ರಕಟಣೆ

WORK FROM HOME
15,000-20,000
8095233888
8095422777

kotak
ಕೊಟ್ಯಾಕ್ ಮಹೀಂದ್ರ ಬ್ಯಾಂಕ್ ಲಿಮಿಟೆಡ್
ಸ್ಥಳ: ಬೆಂಗಳೂರು, ದಿನಾಂಕ: 26-07-2021

ಸಾಹಿತ್ಯ ಸಾಮಾಜಿಕ ನ್ಯಾಯಕ್ಕಾಗಿ ಸೇವೆ ಅನನ್ಯ

ಸಂ.ಕ. ಸಮಾಚಾರ, ಹೊಸಕೋಟೆ

ಕನ್ನಡ ಸಾಹಿತ್ಯ ಕ್ಷೇತ್ರ ಹಾಗೂ ಸಾಮಾಜಿಕ ನ್ಯಾಯಕ್ಕಾಗಿ ದಲಿತ ಕವಿ ಡಾ.ಸಿದ್ದಲಿಂಗಯ್ಯನವರ ಸೇವೆ ಅನನ್ಯ ಎಂದು ತಾಲೂಕು ಕಸಾಪ ಅಧ್ಯಕ್ಷ ಡಾ.ಟಿಡಿಎನ್ ಮೂರ್ತಿ ಅಭಿಪ್ರಾಯಪಟ್ಟರು.

ನಗರದ ಸಿದ್ದಾರ್ಥ ನಗರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಆವರಣದಲ್ಲಿ ತಾಲೂಕು ಕಸಾಪ ವತಿಯಿಂದ ನಡೆದ ದಲಿತ ಕವಿ ಸಿದ್ದಲಿಂಗಯ್ಯ ಹಾಗೂ ಸ್ವಾತಂತ್ರ್ಯ ಹೋರಾಟಗಾರ ಸೂ.ರಂ.ರಾಮಯ್ಯನವರ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು. ಬಂಡಾಯ, ದಲಿತ ಕವಿ ಎಂದೇ ಪ್ರಸಿದ್ಧಿ ಪಡೆದಿದ್ದ ಸಿದ್ದಲಿಂಗಯ್ಯನವರು ಕಾವ್ಯ, ಸಾಹಿತ್ಯದ ಮೂಲಕವೇ ಸಾಮಾಜಿಕ ನ್ಯಾಯಕ್ಕಾಗಿ ಹೋರಾಟ ನಡೆಸಿದ ವಿಶೇಷ ವ್ಯಕ್ತಿ. ವಿಶ್ವಗುರು ಬಸವಣ್ಣನವರ ವಿಚಾರಧಾರೆ ಮೈಗೂಡಿಸಿಕೊಂಡಿದ್ದ ಅವರು ಕನ್ನಡ ಸಾರಸ್ವತ ಲೋಕಕ್ಕೆ ಸಾಕಷ್ಟು ಕೊಡುಗೆ ಕೊಟ್ಟ ಧೀಮಂತ ವ್ಯಕ್ತಿ. ಅಲ್ಲದೆ ಹೊಸಕೋಟೆ ತಾಲೂಕಿನ ಮಾಜಿ ಶಾಸಕರಾಗಿದ್ದ ಸೂ.ರಂ.ರಾಮಯ್ಯನವರು ತಮ್ಮ ಹೆಸರಿನಲ್ಲಿಯೆ ಕನ್ನಡತನವನ್ನು ತಳಕು ಹಾಕಿಕೊಂಡಿದ್ದರು. ಆದರೆ ಪ್ರಸ್ತುತ ರಾಜಕಾರಣಿಗಳು ಕೇವಲ ಭಾಷಣಗಳಲ್ಲಿ ಕನ್ನಡತನವನ್ನು ಉಳಿಸುವ ಕೆಲಸಕ್ಕೆ ಮುಂದಾಗಿದ್ದಾರೆ ಅಷ್ಟೇ. ಆದ್ದರಿಂದ ಕನ್ನಡಕ್ಕೆ ಕೊಡುಗೆ ಕೊಟ್ಟ ಮಹನೀಯರ ಸ್ಮರಣೆ ನಿತ್ಯೋತ್ಸವವಾಗಬೇಕು ಎಂದರು.

ಕಸಾಪ ಜಿಲ್ಲಾ ಗೌರವ ಕಾರ್ಯದರ್ಶಿ ಕೆ.ವಿ.ಶ್ರೀಕಾಂತ್, ಅಧ್ಯಕ್ಷರ ಬದಲಾವಣೆ ವಿಚಾರವಾಗಿ ಪರಿಷತ್‌ನಲ್ಲಿ ತನ್ನದೇ ಆದ ರೀತಿ-ನೀತಿ ಇದೆ. ಇದನ್ನು ಪ್ರತಿಯೊಬ್ಬರು ಸಮರ್ಪಕವಾಗಿ ಪಾಲನೆ ಮಾಡಬೇಕು. ಪರಿಷತ್ ಎನ್ನುವುದು ಯಾರೊಬ್ಬರ ವೈಯಕ್ತಿಕದ್ದಲ್ಲ ಎಂದರು. ತಾಲೂಕು ಕಾರ್ಯನಿರತ ಪರ್ತಕರ್ತರ ಸಂಘದ ಅಧ್ಯಕ್ಷ ರಾಜ ಆರ್ಟ್ಸ್ ಮುನಿರಾಜು, ಕಸಾಪ ಉಪಾಧ್ಯಕ್ಷ ವೆಂಕಟರಮಣಪ್ಪ, ಮಾಜಿ ಗೌರವ ಕಾರ್ಯದರ್ಶಿ ಸಿ.ಎಲ್.ರಾಮಮೂರ್ತಿ, ನಿಕಟಪೂರ್ವ ಕೋಶಾಧ್ಯಕ್ಷ ಶ್ರೀರಾಮಪ್ಪ, ಕಲಾವಿದ ಈಶ್ವರಪ್ಪ ಪೂಜಾರಿ ಇದ್ದರು.

ಕಸಾಪ ವತಿಯಿಂದ ದಲಿತ ಕವಿ ಸಿದ್ದಲಿಂಗಯ್ಯ ಹಾಗೂ ಸ್ವಾತಂತ್ರ್ಯ ಹೋರಾಟಗಾರ ಸೂ.ರಂ.ರಾಮಯ್ಯನವರ ಸ್ಮರಣೆ ಕಾರ್ಯಕ್ರಮದಲ್ಲಿ ಪುಷ್ಪನಮನ ಸಲ್ಲಿಸಲಾಯಿತು.

ಸೂಕ್ತ ಪ್ರಮಾಣದಲ್ಲಿ ಲಸಿಕೆ ಪೂರೈಸಲು ಆಗ್ರಹ

ಸಂ.ಕ ಸಮಾಚಾರ ದೇವನಹಳ್ಳಿ

ಗ್ರಾಮೀಣ ಪ್ರದೇಶದ ಗ್ರಾಮಗಳಲ್ಲಿ ಕೋವಿಡ್ ಲಸಿಕೆ ಅಭಾವ ತಲೆದೋರಿದೆ ಎಂದು ಆಲೂರುದುದ್ದನಹಳ್ಳಿ ಗ್ರಾಪಂ ಅಧ್ಯಕ್ಷೆ ಗೌರಮ್ಮರಾಮಣ್ಣ ಹೇಳಿದರು. ತಾಲೂಕಿನ ದಿನ್ನೂರು ಗ್ರಾಮದ ಸರ್ಕಾರಿ ಶಾಲೆಯಲ್ಲಿ ನಡೆದ ಕೋವಿಡ್ ಲಸಿಕೆ ಅಭಿಯಾನದಲ್ಲಿ ಮಾತನಾಡಿದ ಅವರು, ಗ್ರಾಪಂ ವ್ಯಾಪ್ತಿಯಲ್ಲಿ 6450 ಜನಸಂಖ್ಯೆ ಇದ್ದು, ದಿನ್ನೂರು ಗ್ರಾಮದಲ್ಲಿ 125 ಜನಸಂಖ್ಯೆ ಇದ್ದು, 50ರಷ್ಟು ಜನರು ಮಾತ್ರ ಲಸಿಕೆ ಹಾಕಿಸಿಕೊಂಡಿದ್ದಾರೆ. ಯಾವುದೇ ಪಾಸಿಟಿವ್ ಪ್ರಕರಣಗಳು ಇಲ್ಲ. ಆರೋಗ್ಯ ಇಲಾಖೆ ಲಸಿಕೆ ಪೂರೈಸಲು ಕ್ರಮವಹಿಸಬೇಕೆಂದರು.

ಕುಂದಾಣ ವಿಎಸ್‌ಎಸ್‌ಎನ್ ಅಧ್ಯಕ್ಷ ದಿನ್ನೂರು ರಾಮಣ್ಣ ಮಾತನಾಡಿ, ಸುಣಘಟ್ಟ, ಬನ್ನಿಮಂಗಲ, ಆಲೂರು, ಬೀರಸಂದ್ರ, ಗ್ರಾಮಗಳಲ್ಲಿ ಕೋವಿಡ್ ಲಸಿಕೆಯ ಅಭಾವವಿದೆ. ಲಸಿಕೆಯ ಅವಶ್ಯಕತೆ ಇದ್ದು, ಈಗಾಗಲೇ ಕಡಿಮೆ ಜನಸಂಖ್ಯೆಯ ಗ್ರಾಮಗಳಲ್ಲಿ ಲಸಿಕೆ ಹಾಕಲಾಗಿದೆ. ಪೂರ್ಣ ಪ್ರಮಾಣದಲ್ಲಿ ನೀಡಿದರೆ ಹೆಚ್ಚು ಅನುಕೂಲವಾಗಲಿದೆ ಎಂದರು. ಕಾಂತ ಮುನಿರಾಜು, ಸದಸ್ಯರು, ಗ್ರಾಮದ ಮುಖಂಡರು, ಆರೋಗ್ಯ ಇಲಾಖೆಯ ಸಿಬ್ಬಂದಿ, ಇದ್ದರು.